ಮಲಪ್ರಭಾ ಎಡದಂಡೆ ಕಾಲುವೆ ಕುರಿತು

233 - ಶ್ರೀ ಬಿ.ಬಿ. ಚಿಮ್ಮನಕಟ್ಟಿ (ಬಾದಾಮಿ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಲಪ್ರಭಾ ಎಡದಂಡೆ ಕಾಲುವೆಯಿಂದ ಬಾದಾಮಿ ತಾಲ್ಲೂಕಿನಲ್ಲಿ ಒಟ್ಟು ಎಷ್ಟು ಎಕರೆ ಜಮೀನು ನೀರಾವರಿಗೆ ಒಳಪಡುತ್ತದೆ.

ಆ) 1991-92 ರಿಂದ 1994-95ರವರೆಗೆ ಈ ಕಾಲುವೆಗೆ ಒಟ್ಟು ಬಿಡುಗಡೆ ಮಾಡಿದ ಹಣವೆಷ್ಟು;

ಇ) ಈ ವರ್ಷದ ಆಯವ್ಯಯದಲ್ಲಿ ಇನ್ನುಳಿದ ಈ ಕಾಲುವೆ ಮತ್ತು ಉಪ ಕಾಲುವೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗುವುದು. ಹಾಗೂ ಎಂದು ಪೂರ್ಣಗೊಳಿಸಲಾಗುವುದು?

ಶ್ರೀ ಹೆಚ್. ಡಿ. ದೇವೇಗೌಡ (ಮುಖ್ಯಮಂತ್ರಿಗಳು) :

ಅ) ಮಲಪ್ರಭಾ ಎಡದಂಡೆ ಕಾಲುವೆಯಿಂದ ಬಾದಾಮಿ ತಾಲ್ಲೂಕಿನಲ್ಲಿ 37584 ಎಕರೆ (15,210 ಹೆಕ್ಟೇರ್) ಜಮೀನು ನೀರಾವರಿಗೆ ಈಗಾಗಲೇ ಒಳಪಟ್ಟಿದೆ. ಯೋಜನೆ ಪೂರ್ಣಗೊಂಡ ನಂತರ 30,037 ಹೆಕ್ಟೇರ್ ಭೂಮಿಗೆ ನೀರೊದಗಿಸುವ ಅಂದಾಜನ್ನು ಹೊಂದಲಾಗಿದೆ.

ಆ) ಬಾದಾಮಿ ತಾಲ್ಲೂಕಿನಲ್ಲಿ ಈ ಕಾಲುವೆಗೆ ಕಳೆದ 1991-92ರಿಂದ 1994-95ರ (2:95) ರವರೆಗೆ ಒಟ್ಟು 537.57 ಲಕ್ಷ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ.

ಇ) 1994-95ನೇ ಆಯವ್ಯಯದಲ್ಲಿ ಬಾದಾಮಿ ತಾಲ್ಲೂಕಿನಲ್ಲಿ ಬರುವ ಈ ಯೋಜನೆಯಡಿ ಕೆಲಸಗಳಿಗಾಗಿ ರೂ. 346.00 ಲಕ್ಷ ಅನುದಾನ ಒದಗಿಸಿದ್ದು ಫೆಬ್ರವರಿ 95ರವರೆಗೆ ರೂ.65.84 ಲಕ್ಷ ಖರ್ಚು ಮಾಡಲಾಗಿದೆ. ಅದನ್ನು ಹಾಗೂ ಕ್ರಿ.ಸ. 2000ನೇ ಇಸ್ವಿಯೊಳಗೆ ಪೂರ್ಣಗೊಳಿಸಲು ಯೋಜನೆ ಹಮ್ಮಿಕೊಳ್ಳಲಾಗಿದೆ.

ಮಂಡ್ಯ ಜಿಲ್ಲೆಯ ವಿಶ್ವೇಶ್ವರಯ್ಯ ನಾಲಾ ಆಧುನೀಕರಣ

234 - ಶ್ರೀ ಬಿ. ಸೋಮಶೇಖರ್ (ಮಳವಳ್ಳಿ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆಯ ವಿಶ್ವೇಶ್ವರಯ್ಯ ನಾಲೆಯನ್ನು ಆಧುನೀಕರಣಗೊಳಿಸಲು ಸರ್ಕಾರದವರು ನಿಗದಿಪಡಿಸಿರುವ ಹಣವೆಷ್ಟು?

ಆ) ಆಧುನೀಕರಣಕ್ಕಾಗಿ ಈವರೆವಿಗೂ ಸರ್ಕಾರದವರು ವೆಚ್ಚ ಮಾಡಿರುವ ಹಣವೆಷ್ಟು? ಹಾಗೂ ಅದನ್ನು ಯಾವಾಗ ಪೂರ್ಣಗೊಳಿಸಲಾಗುವುದು.

ಶ್ರೀ ಹೆಚ್.ಡಿ. ದೇವೇಗೌಡ (ಮುಖ್ಯಮಂತ್ರಿಗಳು) :

ಅ) 1994-95ನೇ ಸಾಲಿನಲ್ಲಿ ವಿಶ್ವೇಶ್ವರಯ್ಯ ನಾಲೆಯ ಆಧುನೀಕರಣಕ್ಕೆ 25.000 ಕೋಟಿ ರೂ.ಗಳ ಅನುದಾನ ಇದೆ.

ಆ) ಈ ಕಾಮಗಾರಿಯನ್ನು ಪ್ರಾರಂಭಿಸಿದ ದಿನಾಂಕದಿಂದ 1995ರ ಜನವರಿ ಅಂತ್ಯದವರೆಗೆ ಮಾಡಲಾಗಿರುವ ವೆಚ್ಚ 55.71 ಕೋಟಿ ರೂ.ಗಳು. ಈ ಯೋಜನೆಯನ್ನು 1997-98ನೇ ಸಾಲಿನಲ್ಲಿ ಪೂರ್ಣಗೊಳಿಸುವ ಕಾರ್ಯಕ್ರಮ ಇದೆ.

ಮಳವಳ್ಳಿ ತಾಲ್ಲೂಕು ಬಿ.ಜಿ. ಪುರ ನಾಲಾ ಅಭಿವೃದ್ಧಿ

234 - ಶ್ರೀ ಬಿ. ಸೋಮಶೇಖರ್ (ಮಳವಳ್ಳಿ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಮಳವಳ್ಳಿ ತಾಲ್ಲೂಕು ಬಿ.ಜಿ.ಪುರ ನಾಲೆಯನ್ನು ಕಲ್ಯಾಣಿ ಕೊಪ್ಪಲು ವರೆಗೆ ಮುಂದುವರಿಸಿ ಅಭಿವೃದ್ಧಿ ಮಾಡಲು ಸರ್ಕಾರದವರೆಗೆ ಪ್ರಸ್ತಾವನೆ ಬಂದಿದೆಯೇ?

2) ಹಾಗಿದ್ದಲ್ಲಿ ಸರ್ಕಾರದವರು ಇದಕ್ಕಾಗಿ ಮಂಜೂರಾತಿಯನ್ನು ನೀಡಿದ್ದಾರೆಯೇ ಹಾಗೂ ಎಷ್ಟು ಹಣವನ್ನು ನಿಗದಿ ಪಡಿಸಲಾಗಿದೆ?

3) ಈ ಕೆಲಸವನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಹೆಚ್. ಡಿ. ದೇವೇಗೌಡ (ಮುಖ್ಯಮಂತ್ರಿಗಳು) :

1) ಬಂದಿದೆ.

2) ಮತ್ತು 3) ಈ ಪ್ರಸ್ತಾವನೆಯು ಇನ್ನೂ ಪರಿಶೀಲನೆಯಲ್ಲಿದೆ.

ಬೆಂಗಳೂರು ನಗರದಲ್ಲಿ ಚರಂಡಿಯನ್ನು ಸ್ವಚ್ಛಗೊಳಿಸುವುದು

236 - ಶ್ರೀ ಸುರೇಶ್‌ಕುಮಾರ್ (ರಾಜಾಜಿನಗರ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದ ಲಾಲ್‌ಬಾಗ್ ಸಿದ್ದಾಪುರ ಬಡಾವಣೆಯಲ್ಲಿ ಪಿ.ಡಬ್ಲ್ಯೂ.ಡಿ ಪ್ಲಾಟ್‌ಗಳ 5ನೇ ಬ್ಲಾಕ್ ಹಾಗೂ ಇತರೆ ಬ್ಲಾಕ್‌ಗಳ ಮುಂದೆ ಇರುವ ಮೋರಿಗಳನ್ನು, ಚರಂಡಿಗಳನ್ನು ಸ್ವಚ್ಛತೆಗೊಳಿಸದೇ ಇರುವುದರಿಂದ ದುರ್ವಾಸನೆ ಹಾಗೂ ಸೊಳ್ಳೆಗಳ ಕಾಟದಿಂದ ನಿವಾಸಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಬಗ್ಗೆ ಸರ್ಕಾರಕ್ಕೆ ಸಾಕಷ್ಟು ದೂರುಗಳನ್ನು ನಿವಾಸಿಗಳು ನೀಡಿದ್ದರೂ ಯಾವುದೇ ಕ್ರಮಕೈಗೊಳ್ಳದಿರುವುದು ನಿಜವೆ?

ಇ) ಹಾಗಿದ್ದಲ್ಲಿ ಕೂಡಲೇ ಈ ವಿಷಯದಲ್ಲಿ ಕ್ರಮಕೈಗೊಳ್ಳುವರೇ?